ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ,ಧಾರವಾಡ, ಕಾರವಾರ, ವಿಜಯಪುರ,ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:18/ಸಂಚಿಕೆ:122 RNI NO.KAR KAN/2003/10452:No.G2/PMG/KA/NK/743/18-20 ಬುಧವಾರ ದಿನಾಂಕ: 15-04-2020 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com

ಬೆಳಗಾವಿಯಲ್ಲಿ 18ಕ್ಕೇರಿದ ಕೊರೊನಾ ಸೋಂಕಿತರ ಸಂಖ್ಯೆ

ಬೆಳಗಾವಿ; ರಾಜ್ಯದಲ್ಲಿ ಮತ್ತೆ ಕೊರೊನಾ ಮಹಾಮಾರಿ ಕೊರೊನಾ ತನ್ನ ಅಟ್ಟಹಾಸ ಮುಂದುವರೆಸಿದೆ. ಇಂದು ಒಂದೇ ದಿನ ರಾಜ್ಯದಲ್ಲಿ ಹೊಸದಾಗಿ 11 ಕೊರೊನಾ ಸೋಂಕು ಪತ್ತೆಯಾಗಿವೆ. ಇದರಲ್ಲಿ ಬೆಳಗಾವಿ ಜಿಲ್ಲೆಯಲ್ಲಿಯೇ ಮತ್ತೊಂದು ಕೊರೊನಾ ಸೋಂಕು ದೃಢವಾಗಿದೆ. ಈ ಮೂಲಕ ಬೆಳಗಾವಿ ಜಿಲ್ಲೆಯಲ್ಲಿ ಕೊರೊನಾ ಸೋಂಕಿತರ ಸಂಖ್ಯೆ 18ಕ್ಕೇ ಏರಿಕೆಯಾಗಿದ್ದು. ಸಧ್ಯ ಕುಂದಾನಗರಿ ಜನರಲ್ಲಿ ತೀವ್ರ ಆತಂಕ ಮೂಡಿಸಿದೆ.ಹೌದು ಮಂಗಳವಾರ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಹೆಲ್ತ್ ಬುಲೆಟಿನ್ ಬಿಡುಗಡೆಯಾಗಿದ್ದು. ಇಂದು ರಾಜ್ಯದಲ್ಲಿ ಹೊಸದಾಗಿ 11ಕೊರೊನಾ ಸೋಂಕು ಪತ್ತೆಯಾಗಿವೆ. (2ನೇ ಪುಟಕ್ಕೆ)

ಬಾಳೇಕುಂದ್ರಿ ಕೆಎಚ್ ಗ್ರಾಮದ ಎರಡು ಅಂಗಡಿಗಳಲ್ಲಿ ಬೆಂಕಿ ಅವಘಡ

ಬೆಳಗಾವಿ ; ಮಂಗಳವಾರ ಮಧ್ಯಾಹ್ನ ಬಾಳೇಕುಂದ್ರಿ ಕೆಎಚ್ ಗ್ರಾಮದಲ್ಲಿ ಈ ಬೆಂಕಿ ಅವಘಡ ಸಂಭವಿಸಿದ್ದು. ಶ್ರೀಕಾಂತ ಕುಂಬಾರ, ನಾಗೇಶ ಕಾಜಗಾರ ಅವರಿಗೆ ಸೇರಿದ ಕಿರಾಣಿ ಅಂಗಡಿ, ಬ್ಯಾಂಗಲ್ಸ್ ಶಾಪ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದ್ದರಿಂದ 1 ಲಕ್ಷ 50 ಸಾವಿರಕ್ಕೂ ಹೆಚ್ಚು ಮೌಲ್ಯದ ವಸ್ತುಗಳು ಹಾನಿಯಾಗಿವೆ. ಸ್ಥಳಕ್ಕೆ ಅಗ್ನಿಶಾಮ ಸಿಬ್ಬಂದಿ ಆಗಮಿಸಿ ಬೆಂಕಿ ನಂದಿಸಲು ಯಶಸ್ವಿಯಾಗಿದ್ದಾರೆ.

ಈ ವೇಳೆ ಠಾಣಾಧಿಕಾರಿ ವ್ಹಿ.ಎಸ್.ಠಕ್ಕೇಕರ್, ಸಿಬ್ಬಂದಿಗಳಾದ ಸಂತೋಷ ಕೊರವಿ, ವ್ಹಿ.ಎಸ್.ಪಾಟೀಲ್, ಪ್ರಕಾಶ ಶಿಂಧೆ, ರಸೂಲ್ ಕಾಖಂಡಕಿ ಇನ್ನಿತರರು ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದರು. ಮಾರಿಹಾಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ಸಂಭವಿಸಿದೆ.



ಮೇ.3ರ ವರಗೆ ಲಾಕ್‌ಡೌನ್ ವಿಸ್ತರಣೆ

ಬೆಂಗಳೂರು,ಏ.14–ಮಹಾಮಾರಿ ಕೊರೊನಾ ವಿರುದ್ಧದ ಹೋರಾಟವನ್ನು ಮತ್ತಷ್ಟು ಕಠಿಣಗೊಳಿಸಿರುವ ಪ್ರಧಾನ ನರೇಂದ್ರ ಮೋದಿ ಅವರು ಮೇ.3ರವರೆಗೂ ಲಾಕ್‌ಡೌನ್ ಮುಂದುವರೆಯಲಿದೆ ಎಂದು ಘೋಷಿಸಿದ್ದಾರೆ. ಮೊದಲ ಹಂತದ ಲಾಕ್‌ಡೌನ್ ಇಂದು ಅಂತ್ಯಗೊಂಡ ಹಿನ್ನೆಲೆಯಲ್ಲಿ ದೇಶವನ್ನುದ್ದೇಶಿಸಿ ಮಾತನಾಡಿದ ಅವರು, ಕೊರೊನಾ ವಿರುದ್ಧದ ಹೋರಾಟಕ್ಕೆ ಸಪ್ತಸೂತ್ರ ಅನುಸರಿಸುವಂತೆ ರಾಷ್ಟ್ರದ ಜನತೆಗೆ ಕರೆ ನೀಡಿದ್ದಾರೆ.

ಮಾರಣಾಂತಿಕ ಕೊರೊನಾ ವಿರುದ್ಧ ಏ.20ರವರೆಗೂ ಸಂಪೂರ್ಣ ಅವಲೋಕನ ನಡೆಸಲಾಗುವುದು. ನಂತರ ಕೆಲವು ನಿಯಮಗಳನ್ನು ಸಡಿಲಿಕೆ ಮಾಡುವ ಬಗ್ಗೆ ಚಿಂತನೆ ನಡೆಸಲಾಗುವುದು ಎಂದು ಪ್ರಧಾನ ಭರವಸೆ ನೀಡಿದ್ದಾರೆ. ಮನೆಯಲ್ಲಿರುವ ಹಿರಿಯರ ಬಗ್ಗೆ ಕಾಳಜಿ ವಹಿಸಿ, ಲಾಕ್‌ಡೌನ್ ಮತ್ತು ಸಾಮಾಜಿಕ ಅಂತರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ. ಮನೆಯಲ್ಲೇ ತಯಾರಿಸಿದ ಮಾಸ್ಕ್ ಬಳಸಿ, ಬಿಸಿ ನೀರು ಕುಡಿಯುವುದು ಸೇರಿದಂತೆ ಆಯುಷ್ ಇಲಾಖೆ ಶಿಫಾರಸ್ಸಿನ ಅನ್ವಯ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿಕೊಳ್ಳುವತ್ತ ಗಮನಹರಿಸಿ. ಕೊರೊನಾ ಬಗ್ಗೆ ಸಮಗ್ರ ಮಾಹಿತಿ ನೀಡುವ ಆರೋಗ್ಯಸೇತು ಆ?ಯಪ್ ಡೌನ್‌ಲೋಡ್ ಮಾಡಿಕೊಂಡು ರೋಗ ಲಕ್ಷಣಗಳ ಬಗ್ಗೆ ನೀವು ತಿಳಿದುಕೊಳ್ಳಿ. ನಮಗೆ ಗೊತ್ತಿರುವವರಿಗೂ ಆ?ಯಪ್ ಡೌನ್‌ಲೋಡ್ ಮಾಡಿಕೊಳ್ಳಲು ಸಲಹೆ ನೀಡಿ. ಲಾಕ್‌ಡೌನ್‌ನಿಂದ ತತ್ತರಿಸಿರುವ ನಮ್ಮ ಸುತ್ತಮುತ್ತ ಇರುವ ಕೂಲಿಕಾರ್ಮಿಕರು, ಕಡುಬಡವರು ಹಾಗೂ ನಿರ್ಗತಿಕರಿಗೆ ಊಟದ ವ್ಯವಸ್ಥೆ ಕಲ್ಪಿಸಿ.

ವ್ಯವಸಾಯಕ್ಕೆ ನೆರವು ನೀಡಿ. ಉದ್ಯೋಗದಾತರು

(2ನೇ ಪುಟಕ್ಕೆ)

ಡಾ.ಅಂಬೇಡ್ಕರ್ ಪುತ್ಥಳಿಗೆ ಸಚಿವ ಸುರೇಶ್ ಅಂಗಡಿ ಮಾಲಾರ್ಪಣೆ

ಬೆಳಗಾವಿ : ಡಾ.ಬಾಬಾಸಾಹೇಬ್ ಜಯಂತಿ ಅಂಗವಾಗಿ ರೈಲ್ವೆ ಇಲಾಖೆಯ ರಾಜ್ಯ ಸಚಿವರಾದ ಸುರೇಶ್ ಅಂಗಡಿ ಅವರು ಮಂಗಳವಾರ(ಏ.14) ಬೆಳಗಾವಿಯ ಅಂಬೇಡ್ಕರ್ ಉದ್ಯಾನದಲ್ಲಿ ಡಾ.ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು. ಶಾಸಕ ಅನಿಲ್ ಬೆನಕೆ, ದಲಿತ ಸಂಘಟನೆಯ ಮುಖಂಡರಾದ ಮಲ್ಲೇಶ್ ಚೌಗುಲೆ ಮತ್ತಿತರರು ಉಪಸ್ಥಿತರಿದ್ದರು. ಡಾ.ಬಾಬಾಸಾಹೇಬ ಅಂಬೇಡ್ಕರ್ ಜಯಂತಿ. ಪ್ರತಿವರ್ಷ ಅದ್ದೂರಿಯಾಗಿ ಜಯಂತಿಯುನ್ನು ಆಚರಿಸಲಾಗುತ್ತಿತ್ತು. ಆದ್ರೆ ಕೊರೊನಾ ಭೀತಿಯಿಂದ ದೇಶಾಧ್ಯಂತ ಲಾಕ್‌ಡೌನ್ ಆದೇಶ ಜಾರಿ ಹಿನ್ನೆಲೆ ಬೆಳಗಾವಿಯ ಅಂಬೇಡ್ಕರ್ ಉದ್ಯಾನದಲ್ಲಿ ಜಿಲ್ಲಾಡಳಿತ ಹಾಗೂ ಜಯಂತಿ ಸಮಿತಿ ವತಿಯಿಂದ ಈ ಬಾರಿ ಸರಳವಾಗಿ ಮತ್ತು ಸಾಂಕೇತಿಕವಾಗಿ ಜಯಂತಿ ಹಮ್ಮಿಕೊಳ್ಳಲಾಗಿತ್ತು. ಸದಾಶಿವನಗರದ ಬುದ್ಧವಿಹಾರದಲ್ಲಿ ಭಗವಾನ್ ಬುದ್ಧ ಹಾಗೂ ಅಂಬೇಡ್ಕರ್ ಪುತ್ಥಳಿಗೆ ಅಪರ ಜಿಲ್ಲಾಧಿಕಾರಿ ಅಶೋಕ ದುಡಗುಂಟಿ ಪೂಜೆ ಸಲ್ಲಿಸಿದರು. ಬಳಿಕ ಅಂಬೇಡ್ಕರ್ ಉದ್ಯಾನವನದಲ್ಲಿ ಕೇಂದ್ರ ಸಚಿವ ಸುರೇಶ ಅಂಗಡಿ, ಉತ್ತರಶಾಸಕ ಅನಲ ಬೆನಕೆ, ಪಾಲಿಕೆ ಆಯುಕ್ತ ಜಗದೀಶ್ ಕೆಎಚ್,ಮಾರ್ಕೆಟ್ ಎಸಿಪಿನಾರಾಯಣ ಭರಮನ, ಸಿಆರ್ಸಿ ಶ್ರೀಕಾಂತ ಕಟ್ಟಿಮನಿ ಸೇರಿದಂತೆ ಇನ್ನಿತರರು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಇದೇ ವೇಳೆ ಮಾತನಾಡಿದ ಕೇಂದ್ರ ಸಚಿವ ಸುರೇಶ ಅಂಗಡಿ ನಾವೆಲ್ಲಾ ಭಾರತೀಯರು ಎಂಬ ಪರಿಕಲ್ಪನೆ ಕೊಟ್ಟ ಮಹಾನ್ ಪುರುಷ ಡಾ.ಬಿ.ಆರ್. ಅಂಬೇಡ್ಕರ್.ದೇಶಕ್ಕೆ ಶ್ರೇಷ್ಠ ಸಂವಿಧಾನವನ್ನು ಕೊಟ್ಟಿರುವ ಅಂಬೇಡ್ಕರ್ ಅವರ ಮಾರ್ಗದರ್ಶನದಲ್ಲಿ ನಾವೆಲ್ಲಾ ಸಾಗಬೇಕಿದೆ ಎಂದರು. ಇನ್ನು ಮೇ 3ರವೆರೆಗೆ ಲಾಕ್‌ಡೌನ್ ಮುಂದುವರಿಸಿದ್ದು ಎಲ್ಲರೂ ಕಡ್ಡಾಯವಾಗಿ ಲಾಕ್‌ಡೌನ್

(2ನೇ ಪುಟಕ್ಕೆ)

ಬಳ್ಳಾರಿಯಲ್ಲಿ ಅಂಬೇಡ್ಕರ್ ಜಯಂತಿ ಆಚರಣೆ

ಬಳ್ಳಾರಿ, ಏ.14: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ನಗರದ ಮೊದಲ ರೈಲ್ವೆ ಗೇಟ್ ಬಳಿಯ ಅಂಬೇಡ್ಕರ್ ಭವನದ ಹತ್ತಿರದ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರ ಮುಖಾಂತರ ಆಚರಿಸಲಾಯಿತು. ಜಿಲ್ಲಾಧಿಕಾರಿ ಎಸ್.ಎಸ್.ನಕುಲ್,ಶಾಸಕರಾದ ಸೋಮಶೇಖರ್ ರೆಡ್ಡಿ, ನಾಗೇಂದ್ರ, ಎಸ್ಪಿ ಸಿ.ಕೆ.ಬಾಬಾ, ಜಿಪಂ ಸಿಇಒ ಕೆ.ನಿತೀಶ್ ಅವರು ಅಂಬೇಡ್ಕರ್ ಪ್ರತಿಮೆಗೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ನಕುಲ್ ಅವರು ಕೋವಿಡ್–19 ಹಿನ್ನೆಲೆ ಈ ಬಾರಿ ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರ ಜಯಂತಿಯನ್ನು ಸರಳವಾಗಿ ಆಚರಿಸಲಾಗುತ್ತಿದೆ. ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರ ಈ ದೇಶಕ್ಕೆ ನೀಡಿದ ಕೊಡುಗೆ ಗಮನಾರ್ಹ. ಅವರ ವಿಚಾರಧಾರೆಗಳು ಸದಾ ಕಾಲಕ್ಕೂ ಪ್ರಸ್ತುತ ಎಂದರು.

ಅವರ ವಿಚಾರ ಧಾರೆಗಳು ಮತ್ತು ಆದರ್ಶಗಳನ್ನು ಇಂದು ಎಲ್ಲರು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡುವುದರ ಮೂಲಕ ಪ್ರಚುರಪಡಿಸುವ ಕೆಲಸ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಜಿಪಂ ಸದಸ್ಯರಾದ ಎ.ಮಾನಯ್ಯ,ಮುಂಡ್ರಗಿ ನಾಗರಾಜ, ಸಹಾಯಕ ಆಯುಕ್ತ ರಮೇಶ್ ಕೋನರೆಡ್ಡಿ,ಸಮಾಜಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಪ್ಪ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕ ರಾಮೇಶ್ವರಪ್ಪ,ತಹಸೀಲ್ದಾರ್ ವಿಶ್ವಜೀತ್ ಮೆಹತಾ, ವಾರ್ತಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಬಿ.ಕೆ.ರಾಮಲಿಂಗಪ್ಪ, ಬಿಸಿಎಂ ಅಧಿಕಾರಿ ಸಕೀನಾ, ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಶುಭಾ, ಮಹಾನಗರ ಪಾಲಿಕೆ ಆಯುಕ್ತೆ ತುಷಾರಮಣಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘಟನೆಗಳ ಮುಖಂಡರು ಇದ್ದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ 129ನೇ ಜನ್ಮದಿನಾಚರಣೆ

ಕೊಪ್ಪಳ, ಏ. 14: ಸಂವಿಧಾನ ಶಿಲ್ಪಿ, ಮಹಾನ್ ಮಾನವತಾವಾದಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್‌ರವರ 129ನೇ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು (ಏ.14) ಅವರ ಭಾವಚಿತ್ರಕ್ಕೆ ಪುಷ್ಪವನ್ನು ಅರ್ಪಿಸಿ ಭಕ್ತಿ ನಮನ ಸಲ್ಲಿಸಲಾಯಿತು.

ಕೋವಿಡ್–19 ವೈರಾಣು ತಡೆಗಟ್ಟಲು ಏ.14 ರವರೆಗೆ ಲಾಕ್‌ಡೌನ್ ಆದೇಶ ಇರುವ ಹಿನ್ನಲೆಯಲ್ಲಿ ಜಿಲ್ಲಾಡಳಿತ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್‌ರವರ ಜಯಂತಿಯನ್ನು ಕ್ಯಾಂಡಲ್ ಬೆಳಗಿಸಿ, ಅವರ ಭಾವಚಿತ್ರಕ್ಕೆ ಪುಷ್ಪವನ್ನು ಅರ್ಪಿಸಿ ಸರಳವಾಗಿ ಆಚರಿಸಲಾಯಿತು.

ಇದೇ ಸಂದರ್ಭದಲ್ಲಿ ಯಲಬುರ್ಗಾ ಶಾಸಕ ಹಾಲಪ್ಪ ಆಚಾರ್, ಜಿಲ್ಲಾಧಿಕಾರಿ ಪಿ.ಸುನೀಲ್ ಕುಮಾರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಘುನಂದನ ಮೂರ್ತಿ, ಅಪರ ಜಿಲ್ಲಾಧಿಕಾರಿ ಎಂ.ಪಿ ಮಾರುತಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಲಕ್ಷ್ಮಣ ಬಬಲಿ, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ರಾಜು ಹಾಗೂ ಮತ್ತಿತರರು ಉಪಸ್ಥಿತರಿದ್ದು, ಅಂಬೇಡ್ಕರ್‌ರವರ ಭಾವಚಿತ್ರಕ್ಕೆ ಪುಷ್ಪಾರ್ಪಣೆಗೈದು ಭಕ್ತಿ ನಮನ ಸಲ್ಲಿಸಿದರು.

ಮೇ 15ರವರೆಗೆ ರೈತರಿಂದ ಭತ್ತ ಖರೀದಿ ಪ್ರಕ್ರಿಯೆ:ಡಿಸಿ ನಕುಲ್

ಬಳ್ಳಾರಿ,ಏ.14 : ರೈತರಿಂದ ಭತ್ತವನ್ನು ಖರೀದಿ ಪ್ರಕ್ರಿಯೆ ಮೇ 15ರವರೆಗೆ ನಡೆಯಲಿದೆ. ಈ ಕಾರ್ಯಾಚರಣೆಯು 2019–20ನೇ ಸಾಲಿನ ಮುಂಗಾರು ಋತುವಿಗೆ ಮಾತ್ರ ಅನ್ವಯಿಸುತ್ತದೆ. ಹಿಂಗಾರು ಋತುವಿಗಲ್ಲ ಎಂದು ಜಿಲ್ಲಾಧಿಕಾರಿ ಎಸ್.ಎಸ್.ನಕುಲ್ ಅವರು ತಿಳಿಸಿದ್ದಾರೆ.2019–20ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಬಳ್ಳಾರಿ ಜಿಲ್ಲೆಯ ರೈತರಿಂದ ಭತ್ತವನ್ನು ಖರೀದಿ ಮಾಡಲು ಬಳ್ಳಾರಿ/ಕುರುಗೋಡು ಎಪಿಎಂಸಿ ಯಾರ್ಡ್, ಸಿರುಗುಪ್ಪ,ಸಂಡೂರು,ಕೂಡ್ಲಿಗಿ/ಕೊಟ್ಟೂರು,ಹೊಸಪೇಟೆ, ಕಂಪ್ಲಿ,ಹಗರಿಬೊಮ್ಮನಹಳ್ಳಿ,ಹಡಗಲಿ ಮತ್ತು ಹರಪನಳ್ಳಿ ಎಪಿಎಂಸಿ ಯಾರ್ಡ್‌ನಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ.

ಸಾಮಾನ್ಯ ಭತ್ತಕ್ಕೆ ಕ್ವಿಂಟಾಲ್‌ಗೆ ರೂ.1815, ಗ್ರೇಡ್ ಎ ಭತ್ತಕ್ಕೆ ಕ್ವಿಂಟಾಲ್‌ಗೆ ರೂ.1835 ಬೆಂಬಲ ಬೆಲೆ ನಿಗದಿಪಡಿಸಲಾಗಿದೆ.

ಮುಂಗಾರು ಋತುವಿನ ಬೆಂಬಲಬೆಲೆ ಯೋಜನೆಯಡಿಯಲ್ಲಿ ಖರೀದಿ ಕೇಂದ್ರಗಳಲ್ಲಿ ಏ.13ರಿಂದ ಮೇ 1ರವರೆಗೆ ನೋಂದಾಯಿಸಿಕೊಳ್ಳಬಹುದಾಗಿದ್ದು, ಅಷ್ಟರೊಳಗೆ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿಕೊಳ್ಳಲು ರೈತ ಬಾಂಧವರಲ್ಲಿ ಅವರು ಮನವಿ ಮಾಡಿದ್ದಾರೆ. ಮೇ 15ರವರೆಗೆ ರೈತರಿಂದ ಭತ್ತವನ್ನು ಖರೀದಿ ಪ್ರಕ್ರಿಯೆ ನಡೆಯಲಿದೆ ಎಂದು ಅವರು ತಿಳಿಸಿದ್ದಾರೆ.

(2ನೇ ಪುಟಕ್ಕೆ)

ದಿ. ಎಂ. ಬಿ. ದೇಸಾಯಿ ನಿವಾಸಕ್ಕೆ ಸಚಿವ ಸುರೇಶ್ ಅಂಗಡಿ ಭೇಟಿ

ಬೆಳಗಾವಿ ; ನಿನ್ನೆ ನಿಧನರಾದ ಸ್ವಾತಂತ್ರ್ಯ ಹೋರಾಟಗಾರ ಲೋಕದರ್ಶನ ದಿನಪತ್ರಿಕೆ ಸಂಸ್ಥಾಪಕ ಸಂಪಾದಕ ದಿವಂಗತ ಎಂ .ಬಿ.ದೇಸಾಯಿ ಅವರ ನಿವಾಸಕ್ಕೆ ಕೇಂದ್ರ ಸಚಿವ ಸುರೇಶ್ ಅಂಗಡಿ ಅವರು ಇಂದು ಭೇಟಿ ನೀಡಿದರು.ಹಿರಿಯ ಪತ್ರಕರ್ತರು ಆಗಿದ್ದ ಎಂ.ಬಿ .ದೇಸಾಯಿ ಅವರ ಪತ್ನಿ ಮತ್ತು ಪುತ್ರ ಶರತ್ಚಚಂದ್ರ ದೇಸಾಯಿ ಕುಟುಂಬದವರಿಗೆ ಸಾಂತ್ವನ ಹೇಳಿದರು .ಸಚಿವರೊಂದಿಗೆ ಸಂಪಾದಕರ ಸಂಘದ ಅಧ್ಯಕ್ಷ ಮುರುಗೇಶ ಶಿವಪೂಜಿ ಇದ್ದರು . ಈ ಸಂದರ್ಭದಲ್ಲಿ ದಿವಂಗತರ ಪತ್ರಿಕಾ ರಂಗದಲ್ಲಿ ಸೇವೆ ಮತ್ತು ಬೆಳಗಾವಿಯಲ್ಲಿ ಕನ್ನಡ ಪತ್ರಿಕೆಯನ್ನು ನಡೆಸುವ ಸಂದರ್ಭದಲ್ಲಿ ಅವರ ಹೋರಾಟವನ್ನು ಸಚಿವರು ನೆನಪಿಸಿಕೊಂಡರು .

ವಿಶ್ವಶ್ರೇಷ್ಠ ಸಂವಿಧಾನದ ಮೂಲಕ ನೀಡಿದ ಕಾನೂನುಗಳು ನಮಗೆಲ್ಲರಿಗೆ ಸಹಕಾರಿ: ಜಿಲ್ಲಾಧಿಕಾರಿ

ವಿಜಯಪುರ ಏ.14: ಭಾರತ ರತ್ನ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ನೇತೃತ್ವದ ಸಮಿತಿಯು ನಮ್ಮ ದೇಶಕ್ಕೆ ವಿಶ್ವದ ಶ್ರೇಷ್ಠವಾದ ಸಂವಿಧಾನ ನೀಡಿದ್ದು, ಈ ಸಂವಿಧಾನದ ಮೂಲಕ ರೂಪಿಸಲಾದ ಕಾನೂನುಗಳು ನಮಗೆಲ್ಲರಿಗೂ ನೆರವಾಗಿವೆ ಎಂದು ಜಿಲ್ಲಾಧಿಕಾರಿ ವೈ.ಎಸ್ ಪಾಟೀಲ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ 129 ನೇ ಜಯಂತಿ ಅಂಗವಾಗಿ ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದ ಅವರು ಭಾರತದ ಸಂವಿಧಾನವು ಶ್ರೇಷ್ಠವಾಗಿದೆ. ಈ ಸಂವಿಧಾನದ ಮೂಲಕ ನೀಡಿದ ಕಾನೂನಿನ ಅಡಿಯಲ್ಲಿ ಇಂದು ನಾವೆಲ್ಲರೂ ಕಾರ್ಯನಿರ್ವಹಿಸುತ್ತಿದ್ದು, ಕೊರೋನಾದಂತಹ ಮಹಾಮಾರಿಯ ವಿರುದ್ಧ ಹೋರಾಡುವ ಶಕ್ತಿ ಲಭಿಸಿದೆ. ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗದ ಕರ್ತವ್ಯಗಳು, ನಡತೆ ಹಾಗೂ ಸಂವಿಧಾನ ಆಧಾರಿತ ಕಾನೂನುಗಳು ಭಾರತೀಯರಿಗೆ ನೆರವಾಗಿದ್ದು, ಈ ಸಂವಿಧಾನದ ವಿರುದ್ಧ ಯಾವುದೇ ಪರ್ಯಾಯ ಕಾನೂನು ರೂಪಿಸಿದ್ದಲ್ಲಿ ಅದು ತನ್ನಷ್ಟಕ್ಕೆ ತಾನೇ ಬಿದ್ದು ಹೋಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.ಡಾ. ಬಿ.ಆರ್ ಅಂಬೇಡ್ಕರ್ ಅವರ ಜಯಂತಿ ದಿನವು ವಿಶ್ವಕ್ಕೆ ದಲಿತರ ದಿನವಾಗಿದೆ. ಸ್ವಾತಂತ್ರ್ಯಾನಂತರ ಹಾಗೂ ಈವರೆಗೆ ಸುಮಾರು 130 ಕೋಟಿ ಜನಸಂಖ್ಯೆಯಲ್ಲಿ ಸಾವಿರಾರು ಜಾತಿ, ಧರ್ಮ,ಬಡ,ಶ್ರೀಮಂತ ಎಂಬ ಬೇಧಭಾವ್ಲದೆ ನಾವೆಲ್ಲರೂ ಒಂದೇ ಎಂಬ ತಳಹದಿಯ ಮೇಲೆ ಒಗ್ಗಟ್ಟಾಗಿ ನಿಲ್ಲಿಸುವಲ್ಲಿ ಸಂವಿಧಾನ ಮಾರ್ಗದರ್ಶಿಯಾಗಿದ್ದು, ನಾವೆಲ್ಲರೂ ಅಂತಹ ಸಂವಿಧಾನಕ್ಕೆ ಬದ್ಧರಾಗಿ ನಡೆಯೋಣ ಎಂದು ತಿಳಿಸಿದರು.ಭಾರತದ ಸಂವಿಧಾನವು ಶ್ರೇಷ್ಠ ಸಂವಿಧಾನವಾಗಿದ್ದು, ಭಾರತೀಯರೆಲ್ಲರೂ ನೆಮ್ಮದಿಯಿಂದ ಬದುಕಲು ಮಾರ್ಗದರ್ಶಿಯಾಗಿದೆ. ಇಂದಿನ ಕೊರೋನಾದಂತಹ ಸಂದಿಗ್ಧ ಪರಿಸ್ಥಿತಿಯಲ್ಲಿಯೂ ಎಲ್ಲರೂ ಧೈರ್ಯದಿಂದ ಈ ಮಹಾಮಾರಿಯನ್ನು ಎದುರಿಸುವ ಶಕ್ತಿಯನ್ನು ನಮಗೆ ಸಂವಿಧಾನ ನೀಡಿದ್ದು, ಕಾನೂನಿನ ವ್ಯಾಪ್ತಿಯಲ್ಲಿ ಎಲ್ಲರೂ ನಿಯಮಗಳನ್ನು ಪಾಲಿಸುವ ಮೂಲಕ ವಿಶೇಷವಾಗಿ ಕೊರೋನಾ ನಿಯಂತ್ರಣಕ್ಕೆ ನೆರವಾಗುವ ಸಾಮಾಜಿಕ ಅಂತರ ಇತರೆ ನಿಯಮ ಪಾಲನೆಯ ಮೂಲಕ ಈ ಮಹಾಮಾರಿಯ ನಿಯಂತ್ರಣಕ್ಕೆ ನೆರವಾಗುವ ಸಲಹೆ ನೀಡಿದರು. ಭಾರತ ರತ್ನ ಡಾ.ಬಿ.ಆರ್ ಅಂಬೇಡ್ಕರ್ ಅವರು ಹೇಳಿದಂತೆ ಸಂವಿಧಾನವನ್ನು ಗೌರವಿಸಿದರೆ ನನ್ನನ್ನು ಗೌರವಿಸಿದಂತೆ, ಭಾರತದ ಕಟ್ಟಕಡೆಯ ವ್ಯಕ್ತಿಗಾಗಿ ಈ ಸಂವಿಧಾನ ಎಂಬ ಅವರ ಧ್ಯೇಯವಾಕ್ಯಗಳು ಸಮಾಜಕ್ಕೆ ಸ್ಫೂರ್ತಿಯಾಗಿದ್ದು, ಎಲ್ಲರೂ ಸಂವಿಧಾನ ಬದ್ಧವಾಗಿ ನಡೆಯುವ ಮೂಲಕ ಈ ದೇಶದ ಸಮಗ್ರತೆ, ಐಕ್ಯತೆ ಹಾಗೂ ಅಭಿವೃದ್ಧಿಗೆ ಶ್ರಮಿಸೋಣ ಎಂದು ಹೇಳಿದರು.ಇದಕ್ಕೂ ಮುನ್ನ ಡಾ.ಬಿ.ಆರ್ ಅಂಬೇಡ್ಕರ್ ಮೂರ್ತಿಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವ'ಣಾಧಿಕಾರಿ ಹಾಗೂ ಸಮಾಜದ ಮುಖಂಡರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಈ ಎರಡು ಕಾರ್ಯಕ್ರಮಗಳಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಅನುಪಮ್ ಅಗರವಾಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗೋವಿಂದ ರೆಡ್ಡಿ, ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಮ ಅರಸಿದ್ಧಿ, ಡಿಎಸ್‌ಪಿ ಲಕ್ಷ್ಮೀ ನಾರಾಯಣ್, ಉಪವಿಭಾಗಾಧಿಕಾರಿ ಸೋಮಲಿಂಗ ಗೆಣ್ಣೂರ, ಸಮಾಜ ಕಲ್ಯಾಣ ಉಪ ನಿರ್ದೇಶಕ ಮಹೇಶ ಪೋದ್ದಾರ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಶ್ರೀ ಸಿದ್ಧಣ್ಣ, ಪಶು ಸಂಗೋಪನೆ ಇಲಾಖೆ ಉಪ ನಿರ್ದೇಶಕ ಪ್ರಾಣೇಶ ಜಹಾಗೀರದಾರ, ಸಮಾಜದ ಮುಖಂಡರಾದ ಅಡಿವೆಪ್ಪ ಸಾಲಗಲ್, ಅಭಿಷೇಕ ಚಕ್ರವರ್ತಿ, ಜಿತೇಂದ್ರ ಕಾಂಬಳೆ, ನಿವೃತ್ತ ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ಕ್ಯಾತನ್, ಚಂದ್ರಶೇಖರ್ ಕೊಡಬಾಗಿ, ಸುರೇಶ ಗೊಣಸಗಿ, ಸಿದ್ದು ರಾಯಣ್ಣ, ಶಾಂತಪ್ಪ ಶಹಾಪೂರ ಸೇರಿದಂತೆ ಇತರರು ಉಪಸ್ಥಿತರಿದ್ದು, ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮತ್ತು ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಅರ್ಪಿಸಿದರು.